**ದಿನಾಂಕ 11.10.2018 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ- ಶ್ರೀ. ಡಿಎಸ್‌ಬಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದರಲ್ಲಿರುವ ಸಂಗತಿಗಳೆಲ್ಲಾ ಸತ್ಯವಿದ್ದು, ಅದನ್ನು ನಾನೇ ಹೇಳಿ ಬರೆಸಿದ್ದೇನೆ ಹಾಗೂ ಪ್ರಮಾಣ ಪತ್ರಕ್ಕೆ ನಾನೇ ಸಹಿ ಮಾಡಿರುತ್ತೇನೆ.

ಒಂದು ವಂಶವೃಕ್ಷವನ್ನು ಹಾಜರು ಪಡಿಸಿದ್ದು ನಿಪಿ-1 ಎಂದು ಗುರುತಿಸಲಾಯಿತು. ದಿನಾಂಕಃ 02.08.1956ರ ನೋಂದಾಯಿತ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ನಿಪಿ-2 ಎಂದು ಗುರುತಿಸಲಾಯಿತು. ಎರಡು ಕಂದಾಯ ರಶೀದಿಗಳನ್ನು ಹಾಜರು ಪಡಿಸಿದ್ದು ನಿಪಿ-3 ಮತ್ತು ನಿಪಿ-4 ಎಂದು ಗುರುತಿಸಲಾಯಿತು. ಒಂದು ಕಂದಾಯ ತೀರುವಳಿಯನ್ನು ಹಾಜರು ಪಡಿಸಿದ್ದು ನಿಪಿ-5 ಎಂದು ಗುರುತಿಸಲಾಯಿತು. ಮೂರು ಪಹಣಿ ಪತ್ರಿಕೆಗಳನ್ನು ಹಾಜರು ಪಡಿಸಿದ್ದು ನಿಪಿ-6 ರಿಂದ ನಿಪಿ-8 ಎಂದು ಗುರುತಿಸಲಾಯಿತು. ಒಂದು ಮ್ಯೂಟೇಷನ್ ಎಕ್ಸ್‌ಟ್ರ್ಯಾಕ್ಟ್‌ನ ದೃಢೀಕೃತ ನಕಲನ್ನು ಹಾಜರು ಪಡಿಸಿದ್ದು ನಿಪಿ-9 ಎಂದು ಗುರುತಿಸಲಾಯಿತು. ಒಂದು ಋಣಭಾರ ರಾಹಿತ್ಯ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ನಿಪಿ-10 ಎಂದು ಗುರುತಿಸಲಾಯಿತು. ಒಂದು ಪಟ್ಟಾ ಪುಸ್ತಕವನ್ನು ಹಾಜರು ಪಡಿಸಿದ್ದು ನಿಪಿ-11 ಎಂದು ಗುರುತಿಸಲಾಯಿತು. ಆರ್‌ಆರ್‌ಟಿ 18/2012-13ರ ದಿನಾಂಕಃ 18.01.2013ರ ಆದೇಶದ ನಕಲನ್ನು ಹಾಜರು ಪಡಿಸಿದ್ದು ನಿಪಿ-12 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಸಮಯಾವಕಾಶ ಕೋರಿದ್ದರಿಂದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತುಃ**

*(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)*

ಓ ಹೇ ಕೇ ಸ ಇದೆ,

(ಟಿ. ಶ್ರೀಕಾಂತ್)
ಪ್ರಧಾನ ಸಿವಿಲ್‌ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ. ಕೊಳ್ಳೇಗಾಲ.